ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಬಗರ್‌ಹುಕುಂ ಸಾಗುವಳಿ ಚೀಟಿ

6 - ಶ್ರೀ ಎನ್. ಬಸವಯ್ಯ (ವಿಧಾನ ಸಭಾಸದಸ್ಯರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ ಬಗರ್ ಹುಕುಂ ಸಾಗುವಳಿ ಚೀಟಿ ಕೊಟ್ಟಿರುವ ಸಂಖ್ಯೆ ಎಷ್ಟು ಹಾಗೂ ಉಳಿಕೆ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಅವಧಿ ಮೀರಿದಂತಹ ಅರ್ಜಿಗಳ ಸಂಖ್ಯೆ ಎಷ್ಟು? ಹಾಗೂ ಇದರ ಬಗ್ಗೆ ಏನು ಕ್ರಮ ಕೈಗೊಂಡಿರುತ್ತೀರಾ ತಿಳಿಸಿ?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ಬಗರ್ ಹುಕುಂ ಸಾಗುವಳಿ ಚೀಟಿ ಕೊಟ್ಟಿರುವ ಸಂಖ್ಯೆ : 645

ಉಳಿಕೆ ಅರ್ಜಿಗಳ ಸಂಖ್ಯೆ 9979

ಆ) ಅವಧಿ ಮೀರಿ ಬಂದಂತಹ ಅರ್ಜಿಗಳ ಸಂಖ್ಯೆ 1746

ಅವಧಿ ಮೀರಿ ಬಂದಂತಹ ಅರ್ಜಿಗಳ ಬಗ್ಗೆ ಜಮೀನು ಸಕ್ರಮಗೊಳಿಸಲು ಕ್ರಮ ತೆಗೆದುಕೊಳ್ಳಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ.

ಚಿಕ್ಕನಾಯಕನ ಹಳ್ಳಿಗೆ ಸರ್ಕಾರಿ ಬಸ್ ನಿಲ್ದಾಣ

4 - ಶ್ರೀ ಎನ್. ಬಸವಯ್ಯ (ಚಿಕ್ಕನಾಯಕನಹಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿಗೆ ಸರ್ಕಾರಿ ಬಸ್ ನಿಲ್ದಾಣಕ್ಕೆ ಶಂಕುಸ್ಥಾಪನೆಯಾಗಿದ್ದು ಇಲ್ಲಿಯವರೆವಿಗೂ ಕೆಲಸ ಪ್ರಾರಂಭವಾಗದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದನ್ನು ಪ್ರಾರಂಭಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು) :

ಅ) ಹೌದು

ಆ) ಕ.ರಾ.ರ. ಸಂಸ್ಥೆಯು ಹೊಂದಿರುವ 1.10 ಎಕರರೆ ನಿವೇಶನವು ಸಾಗಾಗದೇ ಇರುವುದರಿಂದ ಹೆಚ್ಚುವರಿ ನಿವೇಶನವನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ. ಹೆಚ್ಚುವರಿ ನಿವೇಶನ ದೊರೆತ ನಂತರ ಬಸ್ ನಿಲ್ದಾಣ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗುವುದು.

ಚಿಕ್ಕನಾಯಕನ ಹಳ್ಳಿಯಲ್ಲಿರುವ ಸೇಂದಿವನದ ಬಗ್ಗೆ

18 - ಶ್ರೀ ಎನ್. ಬಸವಯ್ಯ (ಚಿಕ್ಕನಾಯಕನಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿರುವ ಸೇಂದಿವನದ ಎಕರೆಗಳ ವಿಸ್ತೀರ್ಣವೆಷ್ಟು?

ಆ) ಸದರಿ ಜಮೀನಿನಲ್ಲಿ ರೈತರು ಉಳುಮೆ ಮಾಡುತ್ತಿರುವ ಜಮೀನೆಷ್ಟು?

ಇ) ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) 5838-00 ಎಕರೆಗಳು

ಆ) 5838-00 ಎಕರೆ ಪೂರಾ ಜಮೀನಿನಲ್ಲಿ ರೈತರು ಉಳುಮೆ ಮಾಡಿರುತ್ತಾರೆ.